ವಿಶೇಷವಾಗಿ ಬೇಸಿಗೆ ತಿಂಗಳುಗಳಲ್ಲಿ ಕುಡಿಯುವ ನೀರಿನ ತೀವ್ರ ತೊಂದರೆ ಅನುಭವ ಆಗುತ್ತದೆಯೋ ಅಂಥ ಗ್ರಾಮಗಳನ್ನು ಗುರುತಿಸಲು ಹೊಸದಾಗಿ ಒಂದು ಸಮೀಕ್ಷೆಯನ್ನು ತೆಗೆದುಕೊಳ್ಳಲಾಗಿದೆ. ಈ ಸಮೀಕ್ಷೆ ಆಧಾರದ ಮೇಲೆ ಈ ಎಲ್ಲಾ ಗ್ರಾಮಗಳು: ಜನವಸತಿಗಳಿಗೆ ಇನ್ನು ಎರಡು ವರ್ಷಗಳಲ್ಲಿ ಸಾಕಷ್ಟು ಕುಡಿಯುವ ನೀರನ್ನು ಒದಗಿಸಲು ಕ್ರಿಯಾ ಯೋಜನೆಯನ್ನು ತಯಾರಿಸಲಾಗುತ್ತದೆ. ತದನುಸಾರವಾಗಿ, 1993–94ರ ಸಾಲಿಗೆ ಗ್ರಾಮೀಣ ನೀರು ಸರಬರಾಜು ಯೋಜನೆಗಳಿಗೆ ಅನುದಾನ ಹಂಚಿಕೆಯನ್ನು ಶೇಕಡಾ 60ರಷ್ಟು ಹೆಚ್ಚಿಸಲಾಗಿದೆ.

ಪಟ್ಟಾ ಭೂಮಿಯಲ್ಲಿ ಗ್ರಾನೈಟ್ ಕಲ್ಲು ತೆಗೆಯದಂತೆ ತಡೆಯಾಜ್ಞೆ

344 (1088): ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಪಟ್ಟಾ ಭೂಮಿಯಲ್ಲಿ ಗ್ರಾನೈಟ್ ಕಲ್ಲುಗಳನ್ನು ತೆಗೆಯದಂತೆ ಕಂದಾಯ ಇಲಾಖೆಯ ಕಾಯಿದೆಗೆ ತಿದ್ದುಪಡಿ ತರಲಾಗುವುದೆ ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ಪಟ್ಟಾ ಜಮೀನಿನಲ್ಲಿ ಅಕ್ರಮವಾಗಿ ಗ್ರಾನೈಟ್ ಕಲ್ಲುಗಳನ್ನು ತೆಗೆಯುವುದನ್ನು ತಪ್ಪಿಸುವ ಸಲುವಾಗಿ ಈಗಾಗಲೇ ಸರ್ಕಾರವು ಕರ್ನಾಟಕ ಭೂ ಕಂದಾಯ ಕಾಯಿದೆ ಕಲಂ 70ಕ್ಕೆ ಕರ್ನಾಟಕ ಭೂ ಕಂದಾಯ ಕಾಯಿದೆ (ತಿದ್ದುಪಡಿ) ಸುಗ್ರೀವಾಜ್ಞೆ, 1993 ಮೂಲಕ ತಿದ್ದುಪಡಿ ಮಾಡಿರುತ್ತದೆ.

ರಾಜ್ಯದ ಪ್ರತಿಗ್ರಾಮದಲ್ಲಿ ಶೌಚಾಲಯಗಳು

345 (1087): ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಪ್ರತಿ ಗ್ರಾಮದಲ್ಲೂ ಶೌಚಾಲಯಗಳನ್ನು ನಿರ್ಮಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) 1. ರಾಜ್ಯದ ಗ್ರಾಮೀಣ ಜನತೆಗೆ ಶೌಚಾಲಯಗಳನ್ನು ನಿರ್ಮಿಸಲು ಪ್ರತಿ ವರ್ಷ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತಿದ್ದು, ಹಂತಹಂತವಾಗಿ ಕಾರ್ಯರೂಪಕ್ಕೆ ತರಲಾಗುತ್ತಿದೆ.
2. ಈ ಕಾರ್ಯಕ್ರಮವನ್ನು 1984–85ರಲ್ಲಿ ಪ್ರಾರಂಭಿಸಲಾಯಿತು. ಮತ್ತು 1986ರಲ್ಲಿ ಕೇಂದ್ರೀಯ ಗ್ರಾಮೀಣ ನೈರ್ಮಲ್ಯ ಕಾರ್ಯಕ್ರಮ, ಗ್ರಾಮೀಣ ಭೂರಹಿತ ಉದ್ಯೋಗ ಉತ್ಪಾದನೆ ಕಾರ್ಯಕ್ರಮ ಮತ್ತು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಕಾರ್ಯಕ್ರಮಗಳಿಂದ ಪುರವಣಿಗೊಳಿಸಲಾಯಿತು.
3. 1990–91ರಲ್ಲಿ 'ನಿರ್ಮಲ ಗ್ರಾಮ ಯೋಜನೆ' ಕಾರ್ಯಕ್ರಮದಲ್ಲಿ ಮೈಸೂರು, ಕೋಲಾರ, ಬೆಳಗಾಂ ಮತ್ತು ಗುಲ್ಬರ್ಗಾ ಈ ನಾಲ್ಕು ಜಿಲ್ಲೆಗಳನ್ನು ಸೇರಿಸಲಾಯಿತು.
4.ಹೊರದೇಶಗಳಿಂದ ಸಹಾಯ ಪಡೆದಿರುವ ನೀರು ಸರಬರಾಜು ಯೋಜನೆಗಳಲ್ಲಿ ಶೌಚಾಲಯಗಳನ್ನು ಕಟ್ಟಲು ಅವಕಾಶವಿದೆ.